# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 129 (101) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ. ನಾರಾಯಣಸ್ವಾಮಿ |
| ಉತ್ತರಿಸುವ ದಿನಾಂಕ | : | 17-08-2026 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ವಿದ್ಯಾರ್ಥಿಗಳಿಗಾಗಿ ಜಾರಿಯಲ್ಲಿರುವ ಎಲ್ಲಾ ತರಹದ ವಿದ್ಯಾರ್ಥಿ ವೇತನ/ಪ್ರೋತ್ಸಾಹ ಧನ/ಶಿಷ್ಯ ವೇತನ (ಕೇಂದ್ರ ಮತ್ತು ರಾಜ್ಯ ಸರ್ಕಾರ ಪುರಸ್ಕೃತ) ಯೋಜನೆಗಳ ಸಂಪೂರ್ಣ ಮಾಹಿತಿ ಒದಗಿಸುವುದು. ವಿದ್ಯಾರ್ಥಿ ವೇತನ ಯೋಜನೆಗಳಿಗೆ ಆಯ್ಕೆ ಪ್ರಕ್ರಿಯೆ ಯಾವ ಆಧಾರದಲ್ಲಿ ನಡೆಯುತ್ತದೆ; | ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಈ ಕೆಳಕಂಡ ಕಾರ್ಯಕ್ರಮಗಳನ್ನು ಅನುಷ್ಠಾನ ಮಾಡಲಾಗುತ್ತಿದೆ.<br>1) ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ<br>2) ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ<br>3) ಪ್ರೋತ್ಸಾಹಧನ ಕಾರ್ಯಕ್ರಮ<br>4) PhD ಸಂಶೋಧನಾರ್ಥಿಗಳಿಗೆ ಶಿಷ್ಯವೇತನ<br>(ಕಾರ್ಯಕ್ರಮವಾರು ಸಂಪೂರ್ಣ ವಿವರವನ್ನು **ಅನುಬಂಧ**ದಲ್ಲಿ ನೀಡಿದೆ).<br>ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಇ-ಆಡಳಿತ ಕೇಂದ್ರದ ವತಿಯಿಂದ ಅಭಿವೃದ್ಧಿಪಡಿಸಿ ನಿರ್ವಹಿಸಲಾಗುತ್ತಿರುವ "ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್" ಮೂಲಕ ಅನುಷ್ಠಾನ ಮಾಡಲಾಗುತ್ತಿದೆ. ಅರ್ಜಿ ಸಲ್ಲಿಸಿದ ಎಲ್ಲಾ ಅರ್ಹ ವಿದ್ಯಾರ್ಥಿಗಳಿಗೆ ಕಾರ್ಯಕ್ರಮವಾರು ನಿಗದಿಪಡಿಸಲಾದ ಷರತ್ತುಗಳಿಗೆ ಅನುಗುಣವಾಗಿ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ. |
| ಆ) | ಕಳೆದ ಮೂರು ವರ್ಷಗಳಿಂದ ಜಾರಿಯಲ್ಲಿರುವ ವಿದ್ಯಾರ್ಥಿ ವೇತನ ಯೋಜನೆಗಳನ್ನು ರದ್ದುಪಡಿಸಲಾಗಿದೆಯೇ; ಒಂದು ವೇಳೆ ರದ್ದುಪಡಿಸಲಾಗಿದ್ದರೆ ಕಾರಣಗಳೇನು; ಸದರಿ ಆರ್ಥಿಕ ವರ್ಷದಲ್ಲಿ ವಿದ್ಯಾರ್ಥಿಗಳಿಗೆ ಯಾವುದಾದರೂ ಹೊಸ ವಿದ್ಯಾರ್ಥಿ ವೇತನ ಜಾರಿಯಾಗಿದೆಯೇ; (ಸಂಪೂರ್ಣ ಮಾಹಿತಿ ಒದಗಿಸುವುದು) | ಸಮಾಜ ಕಲ್ಯಾಣ ಇಲಾಖೆಯಲ್ಲಿ ಅನುಷ್ಠಾನ ಮಾಡಲಾಗುತ್ತಿರುವ ಯಾವುದೇ ವಿದ್ಯಾರ್ಥಿವೇತನ ಕಾರ್ಯಕ್ರಮಗಳನ್ನು ರದ್ದು ಮಾಡಿರುವುದಿಲ್ಲ. |

ಇ) ಕಳೆದ ಮೂರು ವರ್ಷಗಳಿಂದ ಜಾರಿಯಲ್ಲಿರುವ ವಿದ್ಯಾರ್ಥಿ ವೇತನ ಯೋಜನೆಗಳಲ್ಲಿ ಸಹಾಯ ಧನ ಬಯಸಿ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ತಿರಸ್ಕೃತ ಅರ್ಜಿಗಳ ಸಂಖ್ಯೆ ಎಷ್ಟು; ಯಾವ ಕಾರಣಕ್ಕಾಗಿ ತಿರಸ್ಕರಿಸಲಾಗಿದೆ; ಅರ್ಜಿ ಪುರಸ್ಕೃತಗೊಂಡ ಎಲ್ಲಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ /ಸಹಾಯ ಧನವನ್ನು ಪಾವತಿಸಲಾಗಿದೆಯೇ; ಪಾವತಿಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; ಯಾವ ಕಾರಣಕ್ಕಾಗಿ ಬಾಕಿ ಉಳಿಸಿಕೊಳ್ಳಲಾಗಿದೆ; ಬಾಕಿ ಮೊತ್ತವನ್ನು ಪಾವತಿಸಲು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ;

2023-24, 2024-25 ಮತ್ತು 2025-26ನೇ ಸಾಲಿನಲ್ಲಿ ವಿದ್ಯಾರ್ಥಿವೇತನ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿವೇತನ ಕೋರಿ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಹಾಗೂ ತಿರಸ್ಕೃತವಾದ ಅರ್ಜಿಗಳ ವಿವರ ಈ ಕೆಳಕಂಡಂತಿದೆ.

| **ಕಾರ್ಯಕ್ರಮ** | **ಸ್ವೀಕೃತವಾದ ಅರ್ಜಿಗಳ ಸಂಖ್ಯೆ** | **ತಿರಸ್ಕರಿಸಲಾದ ಅರ್ಜಿಗಳ ಸಂಖ್ಯೆ** |
|---|---|---|
| **2023-24** | | |
| **ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ** | **9,83,611** | **9875** |
| **ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ** | **3,45,067** | **2,335** |
| | | |
| **2024-25** | | |
| **ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ** | **9,41,587** | **8928** |
| **ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ** | **3,52,959** | **589** |
| | | |
| **2025-26** | | |
| **ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ** | **8,26,348** | **9,331** |
| **ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ** | **3,44,202** | **397** |

ವಿದ್ಯಾರ್ಥಿವೇತನ ಕಾರ್ಯಕ್ರಮದ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ಕಾಲಕಾಲಕ್ಕೆ ಹೊರಡಿಸಲಾಗುವ ಮಾರ್ಗಸೂಚಿ/ ಸರ್ಕಾರದ ಆದೇಶಗಳಿಗನುಗುಣವಾಗಿ ಕಾರ್ಯಕ್ರಮವಾರು ಸ್ವೀಕೃತವಾದ ಅರ್ಜಿಗಳನ್ನು ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳು ಪರಿಶೀಲಿಸಿ ಅನುಮೋದನೆ ಮಾಡಲಾಗುತ್ತಿದ್ದು, ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲಾಗುತ್ತಿದೆ.

ಸ್ವೀಕೃತವಾದ ಅರ್ಜಿಗಳ ಪೈಕಿ ಈ ಕೆಳಕಂಡ ಕಾರಣಕ್ಕಾಗಿ ತಾಲ್ಲೂಕು ಮಟ್ಟದ ಅಧಿಕಾರಿಗಳಿಂದ ಅರ್ಜಿಗಳನ್ನು ತಿರಸ್ಕರಿಸಲಾಗಿರುತ್ತದೆ.

---3

1) ವಿದ್ಯಾರ್ಥಿಯ ದಾಖಲಾತಿಯಲ್ಲಿನ ತಂದೆ-ತಾಯಿ ವಿವರಗಳಿಗೂ, ಆದಾಯ/ಜಾತಿ ಪ್ರಮಾಣ ಪತ್ರದಲ್ಲಿನ ವಿವರಗಳಿಗೂ ತಾಳೆಯಾಗದೇ ಇರುವುದು.
2) ವಿದ್ಯಾರ್ಥಿಯ ವಿದ್ಯಾರ್ಥಿವೇತನ ಅರ್ಜಿಯನ್ನು ನೇರವಾಗಿ Auto Renew ಮಾಡಲಾಗುತ್ತಿದ್ದು, ವಿದ್ಯಾರ್ಥಿ ರಾಜ್ಯದ ಯಾವುದೇ ಶಾಲೆಯಲ್ಲಿ ದಾಖಲಾಗದೇ ಇರುವುದು.
3) ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (9 ಮತ್ತು 10ನೇ ತರಗತಿ) ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಪಡೆಯಲು ಕುಟುಂಬದ ವಾರ್ಷಿಕ ಆದಾಯ ಮಿತಿ ರೂ.2.50 ಲಕ್ಷಗಳಿಗೆ ನಿಗದಿಪಡಿಸಲಾಗಿರುತ್ತದೆ. ಹೀಗಾಗಿ, ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (1 ರಿಂದ 8ನೇ ತರಗತಿ) ಕಾರ್ಯಕ್ರಮದಿಂದ Auto Renewal ಆದ ಅರ್ಜಿಗಳು ತಿರಸ್ಕೃತವಾಗಿರುತ್ತದೆ.

ವಿದ್ಯಾರ್ಥಿವೇತನದ ಮೊತ್ತ ಬಾಕಿ ಉಳಿದಿರುವ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ, ಬಹುತೇಕ ಆಧಾರ್ ಜೋಡಣೆ/ಬ್ಯಾಂಕ್ ಖಾತೆ ಅಥವಾ ಆಧಾರ್ Inactive ಆದ ಕಾರಣ ಬಾಕಿ ಉಳಿದಿರುತ್ತದೆ. ಸದರಿ ಸಮಸ್ಯೆಯನ್ನು ಬಗೆಹರಿಸುವ ಸಂಬಂಧ ಈ ಕೆಳಕಂಡಂತೆ ಕ್ರಮವಹಿಸಲಾಗಿರುತ್ತದೆ.

1. ಆಧಾರ್/ಬ್ಯಾಂಕ್ ಖಾತೆಯನ್ನು ಚಾಲ್ತಿಯಲ್ಲಿಡುವಂತೆ ವಿದ್ಯಾರ್ಥಿಗಳಿಗೆ SMS, IVR ಕರೆಗಳನ್ನು ಇಲಾಖೆಯ ವತಿಯಿಂದ ಮಾಡುವ ಮೂಲಕ ವಿದ್ಯಾರ್ಥಿಗಳು ಹಾಗೂ ಪೋಷಕರಲ್ಲಿ ಅರಿವು ಮೂಡಿಸಲಾಗಿರುತ್ತದೆ.

2. ಶಾಲೆ/ಕಾಲೇಜುಗಳ ಹಂತದಲ್ಲಿಯೇ ಸದರಿ ಸಮಸ್ಯೆಯನ್ನು ಬಗೆಹರಿಸುವ ಸಂಬಂಧ ಪ್ರತಿ ಶಾಲೆ/ಕಾಲೇಜುಗಳಲ್ಲಿ ಒಬ್ಬ ಜವಾಬ್ದಾರಿಯುತ ನೋಡಲ್ ಅಧಿಕಾರಿಯನ್ನು ನಿಯೋಜನೆ ಮಾಡಲಾಗಿರುತ್ತದೆ. ಸದರಿ ನೋಡಲ್ ಅಧಿಕಾರಿಗಳಿಗೆ ಇಲಾಖೆಯ ತಾಲ್ಲೂಕು ಮಟ್ಟದ ಅಧಿಕಾರಿಗಳಿಂದ ಸೂಕ್ತ ತರಬೇತಿಯನ್ನು ನೀಡಲಾಗಿರುತ್ತದೆ.

3. ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿದ್ಯಾರ್ಥಿವೇತನ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿರುತ್ತದೆ.

4. ಜಾಹಿರಾತು ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲಾಗಿರುತ್ತದೆ.

---4

<table>
<tr>
<td>ಈ)</td>
<td>ವಿದ್ಯಾರ್ಥಿ ವೇತನ /ಪ್ರೋತ್ಸಾಹ ಧನ/ ಶಿಷ್ಯ ವೇತನ (ಕೇಂದ್ರ ಮತ್ತು ರಾಜ್ಯ ಸರ್ಕಾರ ಪುರಸ್ಕೃತ) ಯೋಜನೆಗಳಲ್ಲಿ ಸಹಾಯ ಧನವನ್ನು ಯಾವ ಕಾಲಮಿತಿಯೊಳಗೆ ಪಾವತಿಸಬೇಕೆಂಬ ನಿಯಮವಿದೆ; ಚಾಲ್ತಿಯಲ್ಲಿರುವ ನಿಯಮಗಳನ್ನು ಪಾಲಿಸಲಾಗುತ್ತಿದೆಯೇ; ಸದರಿ ಯೋಜನೆಗಳಲ್ಲಿನ ಸಹಾಯಧನ ಪಾವತಿ ವಿಳಂಬದ ಕುರಿತು ಆಕ್ಷೇಪಗಳು/ಪ್ರತಿಭಟನೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು? (ಸಂಪೂರ್ಣ ಮಾಹಿತಿ ಒದಗಿಸುವುದು)</td>
<td>ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (1 ರಿಂದ 8ನೇ ತರಗತಿ), ಪ್ರೋತ್ಸಾಹಧನ ಮತ್ತು PhD ಶಿಷ್ಯವೇತನ ಕಾರ್ಯಕ್ರಮಗಳು ರಾಜ್ಯ ಪುರಸ್ಕೃತ ಕಾರ್ಯಕ್ರಮಗಳಾಗಿದ್ದು, ಸದರಿ ಕಾರ್ಯಕ್ರಮಗಳಿಗೆ ಆಯಾ ಆರ್ಥಿಕ ವರ್ಷದ ಅಂತ್ಯದೊಳಗಾಗಿ ಪಾವತಿ ಮಾಡಬೇಕಾಗಿರುತ್ತದೆ.<br><br>ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (9 ಮತ್ತು 10ನೇ ತರಗತಿ) ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿದ್ದು, ಕೇಂದ್ರ ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸಲಾಗುವ ಮಾರ್ಗಸೂಚಿಗಳನ್ವಯ ಅನುಷ್ಠಾನ ಮಾಡಲಾಗುತ್ತಿದೆ. ಸದರಿ ಮಾರ್ಗಸೂಚಿಗಳಲ್ಲಿ ಕಾಲಮಿತಿಗೆ ಸಂಬಂಧಿಸಿದಂತೆ ಈ ಕೆಳಕಂಡಂತೆ ವಿವರಿಸಲಾಗಿರುತ್ತದೆ.<br><br>
<table>
<tr><th>Dates of receiving of application</th><th>Date by which State Share should be released</th><th>Date by which Central share should be released</th></tr>
<tr><td>From 1st April to 31st July</td><td>15th August</td><td>30th August</td></tr>
<tr><td>From 1st August to 30th November</td><td>30th December</td><td>26th January</td></tr>
<tr><td>From 1st December to 31st January</td><td>28th February</td><td>15th Match</td></tr>
<tr><td>From 1st February to 31st March</td><td>With 75 days of application</td><td>Within 90 days of application</td></tr>
</table>
<br>ಕೇಂದ್ರ ಪುರಸ್ಕೃತ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (9 ಮತ್ತು 10ನೇ ತರಗತಿ) ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಂಜೂರಾದ ವಿದ್ಯಾರ್ಥಿವೇತನ ಮೊತ್ತದಲ್ಲಿ ರಾಜ್ಯದ ಪಾಲಿನ ಶೇಕಡ 40 ರಷ್ಟು ಮೊತ್ತವನ್ನು ಪಾವತಿ ಮಾಡಿದ ನಂತರ, ಕೇಂದ್ರದ ಪಾಲಿನ ಶೇಕಡ 60 ರಷ್ಟು ಮೊತ್ತವನ್ನು ಪಾವತಿಗಾಗಿ ಕೇಂದ್ರ ಸರ್ಕಾರದ NSP Portal ಗೆ ದತ್ತಾಂಶವನ್ನು ವರ್ಗಾವಣೆ ಮಾಡಲಾಗುತ್ತಿದೆ. ಕೇಂದ್ರದ ಪಾಲಿನ ಶೇಕಡ 60 ರಷ್ಟು ಮೊತ್ತವನ್ನು ಕೇಂದ್ರ ಸರ್ಕಾರವೇ ನೇರವಾಗಿ ವಿದ್ಯಾರ್ಥಿಗಳ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತಿದೆ.</td>
</tr>
</table>

| | | |
|---|---|---|
| | | ವಿದ್ಯಾರ್ಥಿ ವೇತನ /ಪ್ರೋತ್ಸಾಹ ಧನ/ ಶಿಷ್ಯ ವೇತನ (ಕೇಂದ್ರ ಮತ್ತು ರಾಜ್ಯ ಸರ್ಕಾರ ಪುರಸ್ಕೃತ) ಕಾರ್ಯಕ್ರಮಗಳಡಿ ವಿದ್ಯಾರ್ಥಿವೇತನ/ಪ್ರೋತ್ಸಾಹಧನ ಮೊತ್ತವನ್ನು ಯಾವುದೇ ವಿಳಂಭವಿಲ್ಲದೇ ತ್ವರಿತವಾಗಿ ಪಾವತಿಸುವ ಸಂಬಂಧ ಕೇಂದ್ರೀಕೃತ ಪಾವತಿ ವಿಧಾನದ ಮೂಲಕ ಇಲಾಖೆಯ ಕೇಂದ್ರ ಕಛೇರಿಯಿಂದ DBT Portal ಮೂಲಕ ವಿದ್ಯಾರ್ಥಿಗಳ ಆಧಾರ್ ಜೋಡಿತ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುತ್ತಿದೆ. ಅದರಂತೆ, ವಿದ್ಯಾರ್ಥಿವೇತನ/ಪ್ರೋತ್ಸಾಹಧನ ಮೊತ್ತ ಪಾವತಿ ವಿಳಂಭದ ಕುರಿತು ಯಾವುದೇ ಆಕ್ಷೇಪಗಳು/ದೂರುಗಳು ಸಲ್ಲಿಕೆಯಾಗಿರುವುದಿಲ್ಲ. |

**ಸಕಇ 754 ಪಕವಿ 2026**

**(ಕೆ.ಹೆಚ್.ಮುನಿಯಪ್ಪ)**
**ಸಮಾಜ ಕಲ್ಯಾಣ ಸಚಿವರು**

## **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 129 (101) ಕ್ಕೆ ಅನುಬಂಧ**

1. **ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ**

ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಮುಂದುವರೆಯಲು ಉತ್ತೇಜನ ನೀಡುವ ಸಲುವಾಗಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಇಲಾಖಾ ವತಿಯಿಂದ ಅನುಷ್ಠಾನ ಮಾಡಲಾಗುತ್ತಿದೆ.

- **ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (1ನೇ ತರಗತಿಯಿಂದ 8ನೇ ತರಗತಿ- ರಾಜ್ಯ ಸರ್ಕಾರ)**

1ನೇ ತರಗತಿಯಿಂದ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಸದರಿ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಪಡೆಯಲು ಅರ್ಹರಾಗಿರುತ್ತಾರೆ. ಸದರಿ ಕಾರ್ಯಕ್ರಮವನ್ನು ರಾಜ್ಯ ಸರ್ಕಾರ ಒದಗಿಸುವ ಅನುದಾನದಲ್ಲಿ ಅನುಷ್ಠಾನ ಮಾಡಲಾಗುವುದು.

**ಷರತ್ತುಗಳು:**

✓ ವಿದ್ಯಾರ್ಥಿಯು ಪರಿಶಿಷ್ಟ ಜಾತಿಗೆ ಸೇರಿದ್ದವನಾಗಿರಬೇಕು.
✓ ರಾಜ್ಯ ಸರ್ಕಾರ 1 ರಿಂದ 8ನೇ ತರಗತಿ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ರೂ. 6.00 ಲಕ್ಷಗಳಿಗೆ ನಿಗದಿಪಡಿಸಲಾಗಿದೆ.

ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ತರಗತಿವಾರು ಈ ಕೆಳಕಂಡAತೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನವನ್ನು ಇಲಾಖಾ ವತಿಯಿಂದ ಮಂಜೂರು ಮಾಡಲಾಗುತ್ತಿದೆ.

| **ತರಗತಿ** | **ಬಾಲಕರು** | **ಬಾಲಕಿಯರು** |
|---|---|---|
| 1 ರಿಂದ 5 | 1000/- | 1100/- |
| 6 ರಿಂದ 7 | 1150/- | 1250/- |
| 8ನೇ ತರಗತಿ | 1250/- | 1350/- |

- **ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (9ನೇ ತರಗತಿ ಮತ್ತು 10 ನೇ ತರಗತಿ- ಕೇಂದ್ರ ಸರ್ಕಾರ)**

9ನೇ ತರಗತಿಯಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳು ಸದರಿ ಕಾರ್ಯಕ್ರಮದಡಿ ವಿದ್ಯಾರ್ಥಿವೇತನ ಪಡೆಯಲು ಅರ್ಹರಾಗಿರುತ್ತಾರೆ. ಸದರಿ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರ ಒದಗಿಸುವ ಅನುದಾನದಲ್ಲಿ ಅನುಷ್ಠಾನ ಮಾಡಲಾಗುವುದು.

**ಷರತ್ತುಗಳು:**

- ✓ ವಿದ್ಯಾರ್ಥಿಯು ಪರಿಶಿಷ್ಟ ಜಾತಿಗೆ ಸೇರಿದ್ದವನಾಗಿರಬೇಕು.
- ✓ ಕೇಂದ್ರ ಸರ್ಕಾರ 9 ಮತ್ತು 10 ನೇ ತರಗತಿ ವಿದ್ಯಾರ್ಥಿವೇತನಕ್ಕಾಗಿ ಅರ್ಜಿ ಸಲ್ಲಿಸಲು ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ರೂ. 2.50 ಲಕ್ಷಗಳಿಗೆ ನಿಗದಿಪಡಿಸಲಾಗಿದೆ.

ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ತರಗತಿವಾರು ಈ ಕೆಳಕಂಡAತೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನವನ್ನು ಇಲಾಖಾ ವತಿಯಿಂದ ಮಂಜೂರು ಮಾಡಲಾಗುತ್ತಿದೆ.

| **ತರಗತಿ** | **ಡೇ-ಸ್ಕಾಲರ್** | **ಹಾಸ್ಟೆಲರ್** |
|---|---|---|
| 9 ಮತ್ತು 10ನೇ ತರಗತಿ | 3,500 | 7,000 |

ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು 2018-19ನೇ ಸಾಲಿನಿಂದ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ತಂತ್ರಾAಶದ ಮೂಲಕ ಅನುಷ್ಠಾನ ಮಾಡಲಾಗುತ್ತಿದೆ. ಡಿ.ಬಿ.ಟಿ. ಪೋರ್ಟಲ್ ಮೂಲಕ ವಿದ್ಯಾರ್ಥಿವೇತನ ಮೊತ್ತವನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಜಮ ಮಾಡಲಾಗುತ್ತಿದೆ. ಈ ಪ್ರಕ್ರಿಯೆಗೆ ವಿದ್ಯಾರ್ಥಿಯ ಬ್ಯಾಂಕ್ ಖಾತೆಗೆ ಆಧಾರ್ ಸಂಖ್ಯೆಯ ಜೋಡಣೆ ಕಡ್ಡಾಯವಾಗಿದ್ದು, ಆಧಾರ್ ಸೀಡಿಂಗ್ ಆದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮೊತ್ತವನ್ನು ಜಮೆ ಮಾಡಲಾಗುತ್ತಿದೆ.

**2. ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ (ಕೇಂದ್ರ ಪುರಸ್ಕೃತ)**

ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಮುಂದುವರೆಯಲು ಉತ್ತೇಜನ ನೀಡುವ ಸಲುವಾಗಿ ಮೆಟ್ರಿಕ್‌ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮವನ್ನು ಇಲಾಖಾ ವತಿಯಿಂದ ಅನುಷ್ಠಾನ ಮಾಡಲಾಗುತ್ತಿದೆ. ಸದರಿ ಕಾರ್ಯಕ್ರಮವು ಕೇಂದ್ರ ಪುರಸ್ಕೃತ ಕಾರ್ಯಕ್ರಮವಾಗಿದ್ದು, ಕೇಂದ್ರ ಸರ್ಕಾರವು ಒದಗಿಸಿರುವ ಅನುದಾನದಲ್ಲಿ ಕಾರ್ಯಕ್ರಮ ಅನುಷ್ಠಾನ ಮಾಡಲಾಗುವುದು.

- ರೂ. 2.50 ಲಕ್ಷ ಆದಾಯ ಮಿತಿಯಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಶುಲ್ಕ ಮರುಪಾವತಿಯನ್ನು ಇಲಾಖೆಯಿಂದ ಭರಿಸಲಾಗುತ್ತಿದೆ.
- ರೂ. 2.50 ಲಕ್ಷದಿಂದ ರೂ. 10.00 ಲಕ್ಷವರೆಗಿನ ಆದಾಯ ಮಿತಿಯೊಳಗಿನ ಇಂಜಿನಿಯರಿAಗ್ ಮತ್ತು ವೈಧ್ಯಕೀಯ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ತಾಂತ್ರಿಕ ಮತ್ತು ವೈದ್ಯಕೀಯ ಶಿಕ್ಷಣ ಇಲಾಖೆಯಿಂದ ಶೇಕಡ 50ರಷ್ಟು ಶುಲ್ಕ ವಿನಾಯಿತಿ ಮಾಡಲಾಗುತ್ತಿದೆ.

**ಷರತ್ತುಗಳು:**

- ✓ ವಿದ್ಯಾರ್ಥಿಯು ಪರಿಶಿಷ್ಟ ಜಾತಿಗೆ ಸೇರಿದ್ದವನಾಗಿರಬೇಕು.
- ✓ ಅರ್ಜಿ ಸಲ್ಲಿಸಲು ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ರೂ. 2.50 ಲಕ್ಷಗಳಿಗೆ ನಿಗದಿಪಡಿಸಲಾಗಿದೆ.

ಅರ್ಹ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಕೋರ್ಸುವಾರು ಕಾಲೇಜುಗಳಿಗೆ ಪಾವತಿಸಬೇಕಾದ ಮರುಪಾವತಿಸಲಾಗದ ಕಡ್ಡಾಯ ಶುಲ್ಕಗಳ ಜೊತೆಗೆ ನಿರ್ವಹಣಾ ಭತ್ಯೆಯನ್ನು ಇಲಾಖಾ ವತಿಯಿಂದ ಮಂಜೂರು ಮಾಡಲಾಗುತ್ತಿದೆ.

ಕಾಲೇಜುಗಳಿಗೆ ಪಾವತಿಸಬೇಕಾದ ಮರುಪಾವತಿಸಲಾಗದ ಕಡ್ಡಾಯ ಶುಲ್ಕಗಳ ವಿವರ.

| **ಕ್ರ.ಸಂ** | **ಶುಲ್ಕಗಳ ವಿವರ** |
|---|---|
| 01 | ಬೋಧನಾ ಶುಲ್ಕ |
| 02 | ಪರೀಕ್ಷಾ ಶುಲ್ಕ |
| 03 | ಪ್ರಯೋಗಾಲಯ ಶುಲ್ಕ |
| 04 | ಪ್ರವೇಶ ಶುಲ್ಕ |
| 05 | ಗ್ರಂಥಾಲಯ ಶುಲ್ಕ |
| 06 | ಸ್ಟಡಿರೂಮ್ ಶುಲ್ಕ |
| 07 | ಮ್ಯಾಗಜೀನ್ / ಕ್ಯಾಲೆಂಡರ್ ಶುಲ್ಕ |
| 08 | ವಿಶ್ವವಿದ್ಯಾಲಯ ಶುಲ್ಕ |
| 09 | ಅಭಿವೃದ್ಧಿ ಶುಲ್ಕ |
| 10 | ಇತರೆ ಶುಲ್ಕ |

ಮೆಟ್ರಿಕ್ ನಂತರದ ಕೋರ್ಸುಗಳನ್ನು ಗುಂಪುವಾರು ವಿಂಗಡಿಸಿದ್ದು, ಈ ಕೆಳಕಂಡAತೆ ನಿರ್ವಹಣಾ ವೆಚ್ಚವನ್ನು ಮಂಜೂರು ಮಾಡಲಾಗುವುದು.

ಡೇ ಸ್ಕಾಲರ್ **(Day Scholar)**

ಡೇ ಸ್ಕಾಲರ್ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಈ ಕೆಳಕಂಡAತೆ ನಿರ್ವಹಣಾ ವೆಚ್ಚವನ್ನು ಮಂಜೂರು ಮಾಡಲಾಗುವುದು.

| **ಗುಂಪು** | **ಕೋರ್ಸುಗಳ ವಿವರ** | **ನಿರ್ವಹಣಾ ವೆಚ್ಚ (ವಾರ್ಷಿಕ)** |
|---|---|---|
| I | MBBS / BE/ All PG courses/ M.Phil / Phd etc | 7000 |

| | | |
|---|---|---|
| II | LLB/ Paramedical Nursing Course / B.Pharm/ Nursing Etc | 6500 |
| III | BA/ B.Sc/ B.Com and all Degree courses | 3000 |
| IV | PUC/ ITI/ DIPLOMA etc | 2500 |

ಹಾಸ್ಟೇಲರ್ **(Hosteller)**

ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಪಡೆಯಲು ಅರ್ಹರಿರುವ ವಿದ್ಯಾರ್ಥಿಗಳಿಗೆ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಾವಕಾಶ ಕಲ್ಪಿಸಲಾಗುತ್ತಿದೆ. ಹಾಸ್ಟೇಲರ್ ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಡಿ ಮಾಸಿಕ ಭೋಜನಾ ವೆಚ್ಚವನ್ನು ಈ ಕೆಳಕಂಡAತೆ ಮಂಜೂರು ಮಾಡಲಾಗುವುದು.

| ಗುಂಪು | ಕೋರ್ಸುಗಳ ವಿವರ | ನಿರ್ವಹಣಾ ವೆಚ್ಚ (ವಾರ್ಷಿಕ) |
|---|---|---|
| I | MBBS / BE/ All PG courses/ M.Phil / Phd etc | 13500 |
| II | LLB/ Paramedical Nursing Course / B.Pharm/ Nursing Etc | 9500 |
| III | BA/ B.Sc/ B.Com and all Degree courses | 6000 |
| IV | PUC/ ITI/ DIPLOMA etc | 4000 |

## 3. ಪ್ರೋತ್ಸಾಹಧನ ಕಾರ್ಯಕ್ರಮ

ಪರಿಶಿಷ್ಟ ಜಾತಿ ವಿದ್ಯಾರ್ಥಿಗಳ ವಿದ್ಯಾಭ್ಯಾಸವನ್ನು ಪ್ರೋತ್ಸಾಹಿಸಲು SSLC ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ಮಂಜೂರು ಮಾಡಲಾಗುವುದು.

- **SSLC ಪ್ರೋತ್ಸಾಹಧನ**

SSLC ವಾರ್ಷಿಕ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಸದರಿ ಕಾರ್ಯಕ್ರಮದಡಿ ಪ್ರೋತ್ಸಾಹಧನ ಮಂಜೂರು ಮಾಡಲಾಗುತ್ತಿದೆ.

| ಶೇಕಡವಾರು | ಬಹುಮಾನದ ಮೊತ್ತ |
|---|---|
| ಶೇ 60 ರಿಂದ ಶೇ 75 | 7,000/- |
| ಶೇ 75 ಕ್ಕಿಂತ ಮೇಲ್ಪಟ್ಟು | 15,000/- |
| ಜಿಲ್ಲೆಗೆ ಪ್ರಥಮ | 1,00,000/- |

**ಷರತ್ತುಗಳು:**

- ✓ ವಿದ್ಯಾರ್ಥಿಯು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು.
- ✓ ಅರ್ಜಿ ಸಲ್ಲಿಸಲು ಕುಟುಂಬದ ವಾರ್ಷಿಕ ಆದಾಯ ಮಿತಿ ಇರುವುದಿಲ್ಲ

- **ಮೆಟ್ರಿಕ್ ನಂತರದ ಪ್ರೋತ್ಸಾಹಧನ**

ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ಪ್ರಥಮ ಪ್ರಯತ್ನದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಈ ಕೆಳಕಂಡಂತೆ ಪ್ರೋತ್ಸಾಹಧನ ಮಂಜೂರು ಮಾಡಲಾಗುವುದು.

| **ಕೋರ್ಸಿನ ವಿವರ** | **ಬಹುಮಾನದ ಮೊತ್ತ** |
|---|---|
| PUC/ITI/Diploma | 20,000/- |
| ಪದವಿ | 25,000/- |
| ಸ್ನಾತಕೋತ್ತರ ಪದವಿ | 30,000/- |
| ವೃತ್ತಿಪರ ಪದವಿ (ವೈದ್ಯಕೀಯ/ತಾಂತ್ರಿಕ/ಕೃಷಿ/ಪಶುವೈದ್ಯಕೀಯ | 35,000/- |

**ಷರತ್ತುಗಳು:**

- ✓ ವಿದ್ಯಾರ್ಥಿಯು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು.
- ✓ ಅರ್ಜಿ ಸಲ್ಲಿಸಲು ಕುಟುಂಬದ ವಾರ್ಷಿಕ ಆದಾಯ ಮಿತಿ ಇರುವುದಿಲ್ಲ

- **ವಿಶ್ವವಿದ್ಯಾನಿಲಯ ಮಟ್ಟದಲ್ಲಿ 1 ರಿಂದ 5ನೇ ರ್‍ಯಾಂಕ್ ಪಡೆದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ**

ವಿಶ್ವವಿದ್ಯಾನಿಲಯ ಮಟ್ಟದಲ್ಲಿ ರ್‍ಯಾಂಕ್ ಪಡೆಯುವ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಪ್ರೋತ್ಸಾಹಿಸಲು ಕಲೆ, ವಿಜ್ಞಾನ, ವೈದ್ಯಕೀಯ, ತಾಂತ್ರಿಕ, ವಾಣಿಜ್ಯ, ಕಾನೂನು ಸ್ನಾತಕೋತ್ತರ ಪದವಿಯಲ್ಲಿ ವಿಶ್ವವಿದ್ಯಾನಿಲಯ ಮಟ್ಟದಲ್ಲಿ ಘೋಷಿಸಲಾದ 1 ರಿಂದ 5 ರ್‍ಯಾಂಕ್ ಪಡೆದ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ರೂ. 50,000/-ಗಳ ಪ್ರೋತ್ಸಾಹಧನ ಮಂಜೂರು ಮಾಡಲಾಗುವುದು.

**ಷರತ್ತುಗಳು:**

- ✓ ವಿದ್ಯಾರ್ಥಿಯು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು.
- ✓ ಅರ್ಜಿ ಸಲ್ಲಿಸಲು ಕುಟುಂಬದ ವಾರ್ಷಿಕ ಆದಾಯ ಮಿತಿ ಇರುವುದಿಲ್ಲ

- **ಒಂದು ಬಾರಿ ಪ್ರೋತ್ಸಾಹಧನ ಕಾರ್ಯಕ್ರಮ**

ರಾಷ್ಟ್ರೀಯ ಶಿಕ್ಷಣ ಸಂಸ್ಥೆಗಳಾದ IIT/ IIM/ IISC/ NIT ಮುಂತಾದ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ರೂ. 2.00 ಲಕ್ಷಗಳ ಒಂದು ಬಾರಿ ಪ್ರೋತ್ಸಾಹಧನ ಮಂಜೂರು ಮಾಡಲಾಗುತ್ತಿದೆ.

**ಷರತ್ತುಗಳು:**

- ✓ ವಿದ್ಯಾರ್ಥಿಯು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು.
- ✓ ಅರ್ಜಿ ಸಲ್ಲಿಸಲು ಕುಟುಂಬದ ವಾರ್ಷಿಕ ಆದಾಯ ಮಿತಿ ಇರುವುದಿಲ್ಲ.

**4. PhD ಸಂಶೋಧನಾರ್ಥಿಗಳಿಗೆ ಶಿಷ್ಯವೇತನ:**

ರಾಜ್ಯದ ಸರ್ಕಾರಿ ವಿಶ್ವವಿದ್ಯಾನಿಲಯಗಳಲ್ಲಿ ಪಿಹೆಚ್‌ಡಿ ಪೂರ್ಣಾವಧಿ ಅಧ್ಯಯನದಲ್ಲಿ ತೊಡಗಿರುವ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಮಾಸಿಕ ರೂ.10,000/- ರಂತೆ ಶಿಷ್ಯವೇತನವನ್ನು ಮಂಜೂರು ಮಾಡಲಾಗುತ್ತಿದೆ.

**ಷರತ್ತುಗಳು:**

- ✓ ವಿದ್ಯಾರ್ಥಿಯು ಪರಿಶಿಷ್ಟ ಜಾತಿಗೆ ಸೇರಿದವರಾಗಿರಬೇಕು.
- ✓ ಕರ್ನಾಟಕ ರಾಜ್ಯದ ಸರ್ಕಾರಿ ವಿಶ್ವವಿದ್ಯಾನಿಲಯಗಳಲ್ಲಿ ಪೂರ್ಣಾವಧಿ (Full Time) ಪಿಹೆಚ್‌ಡಿ ಅಧ್ಯಯನದಲ್ಲಿ ತೊಡಗಿರಬೇಕು.
- ✓ ಈ ಸೌಲಭ್ಯವನ್ನು ಪಡೆಯಲಿಚ್ಛಿಸುವ ಅಭ್ಯರ್ಥಿಯು ಭಾರತ ಸರ್ಕಾರ/ಕರ್ನಾಟಕ ಸರ್ಕಾರ/ವಿಶ್ವವಿದ್ಯಾನಿಲಯ/UGC ಅಥವಾ ಇತರೆ ಯಾವುದೇ ಸಂಸ್ಥೆಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಆಯ್ಕೆಯಾಗಿರಬಾರದು.
- ✓ ಅಭ್ಯರ್ಥಿಯ ಗರಿಷ್ಠ ವಯೋಮಿತಿ 45 ವರ್ಷಗಳಾಗಿರುತ್ತದೆ.